# ಕನ್ನಡ ಪೋಸ್ಟ್

KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 306 | Pages. 2 | Date: 30-10-2025, THURSDAY | RNI NO: KARKAN/2024/89601 | Kannada Daily

ಸಂಪುಟ : 01 - ಸಂಚಿಕೆ : 306 - ಪುಟಗಳು : 2 | 30-10-2025 ಗುರುವಾರ | Ph: 8762954248 | ದರ : ₹1


# ಭಾರತೀಯ ಧಾರ್ಮಿಕ ಸಂಸ್ಕೃತಿಗೆ ವಿಶ್ವದ ಗೌರವ

## ನಿರ್ಮಲಾನಂದನಾಥ ಸ್ವಾಮೀಜಿ ಅಭಿಮತ | ವಳಗೇರಹಳ್ಳಿಯಲ್ಲಿ ಧಾರ್ಮಿಕ ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ಭಾರತ ಧರ್ಮದ ತಳಹದಿಯ ಮೇಲೆ ನಿಂತಿದ್ದು ಇಡೀ ವಿಶ್ವವೇ ಇಲ್ಲಿನ ಸಂಸ್ಕೃತಿ ಧರ್ಮಕ್ಕೆ ಗೌರವ ನೀಡುತ್ತಿದೆ ಎಂದು ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ವಳಗೇರಹಳ್ಳಿ ಗ್ರಾಮದ ಶ್ರೀ ವೈದ್ಯನಾಥೇಶ್ವರ ಸ್ವಾಮಿ ಹಾಗೂ ಶ್ರೀ ಕಾಲಭೈರವೇಶ್ವರ ಸ್ವಾಮಿ ದೇವಾಲಯಗಳಲ್ಲಿರುವ ಶ್ರೀ ಮಹಾಗಣಪತಿ ಹಾಗೂ ಶ್ರೀ ಬಸವೇಶ್ವರಸ್ವಾಮಿ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮತ್ತು ದೇವಾಲಯಗಳ ಭಾವಣಿ ಕಳಸ ಪ್ರತಿಷ್ಠಾಪನೆ ಹಾಗೂ ಕುಂಭಾಭಿಷೇಕ ಅಂಗವಾಗಿ ನಡೆದ ಧಾರ್ಮಿಕ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದರು.

ದೇವಾಲಯಗಳ ನಿರ್ಮಾಣದಿಂದ ಗ್ರಾಮದಲ್ಲಿ ಒಗ್ಗಟ್ಟು ಮೂಡುವುದರ ಜೊತೆಗೆ ಧಾರ್ಮಿಕ ಭಾವನೆ ಹೆಚ್ಚಾಗಲಿದೆ. ಆದಿಚುಂಚನಗಿರಿ ಮಠದ ವತಿಯಿಂದ ಶಿಕ್ಷಣಕ್ಕೆ ಹೆಚ್ಚಿನ ನೀಡಲಾಗುತ್ತಿದೆ. ಈ ಭಾಗದ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಅಣತಿ ಗ್ರಾಮದಲ್ಲಿ ಮಠದ ವತಿಯಿಂದ ಶಾಲೆ ತೆರೆಯಲಾಗಿದೆ ಎಂದರು.

### ಜಲಾಶಯವಿದ್ದರೂ ನೀರಿಲ್ಲ

ಅರಸೀಕೆರೆ ಶಾಸಕ ಕೆ.ಎಂ. ಶಿವಲಿಂಗೇಗೌಡ ಮಾತನಾಡಿ, ಹೇಮಾವತಿ ಜಲಾಶಯ ಜಿಲ್ಲೆಯಲ್ಲಿ ಇದ್ದರೂ ಅರಸೀಕೆರೆ ಹಾಗೂ ಚನ್ನರಾಯಪಟ್ಟಣ ತಾಲ್ಲೂಕಿನ ಕೆರೆ ತುಂಬಿಸಲು ಸಾಧ್ಯವಾಗುತ್ತಿಲ್ಲ. ನೀರಾವರಿ ಇಲಾಖೆಯ ಕೆಲವು ಕಾಯ್ದೆಗಳಿಂದ ಸಮಸ್ಯೆಯಾಗುತ್ತಿದೆ. ಈ ಬಗ್ಗೆ ರಾಜ್ಯ ಸರ್ಕಾರ ಹಾಸನ ಜಿಲ್ಲೆಯನ್ನು ಈ ಕಾಯ್ದೆಯಿಂದ ಹೊರಗಿಟ್ಟು ಪುನರ್ ನವೀಕರಿಸಬೇಕು. ಈಗಾಗಲೇ ಹೇಮಾವತಿ ನದಿಯಿಂದ ಪೈಪ್ ಲೈನ್ ಮೂಲಕ ತಾಲ್ಲೂಕಿನ 10 ಕೆರೆಗಳನ್ನು ತುಂಬಿಸಲಾಗಿದೆ. ಎತ್ತಿನಹೊಳೆ ಯೋಜನೆ ಪೂರ್ಣಗೊಂಡರೆ ತಾಲ್ಲೂಕಿನ ಎಲ್ಲಾ ಕೆರೆಗಳನ್ನು ಭರ್ತಿ ಮಾಡಲು ಸಾಧ್ಯವಾಗುತ್ತದೆ ಎಂದು ಹೇಳಿದರು.

### ಕೆರೆ ತುಂಬಿಸಲು ವೈಯಕ್ತಿಕ ಖರ್ಚು

ಶಾಸಕ ಸಿ.ಎನ್. ಬಾಲಕೃಷ್ಣ ಮಾತನಾಡಿ, ಗ್ರಾಮದಲ್ಲಿ ಸುಮಾರು 1 ಕೋಟಿ ರೂ. ವೆಚ್ಚದಲ್ಲಿ ಶ್ರೀ ಮಹಾಗಣಪತಿ ಹಾಗೂ ಶ್ರೀ ಬಸವೇಶ್ವರ ಸ್ವಾಮಿಯವರ ಮೂರ್ತಿ ಪ್ರತಿಷ್ಠಾಪನೆ ಸೇರಿದಂತೆ ವಿವಿಧ ದೇವಾಲಯದ ಅಭಿವೃದ್ಧಿ ಕೆಲಸಗಳಿಗೆ ಆದ್ಯತೆ ನೀಡಲಾಗಿದೆ. ಗ್ರಾಮದಲ್ಲಿ ನಿರ್ಮಾಣವಾಗಬೇಕಾಗಿರುವ ಶ್ರೀ ಆಂಜನೇಯಸ್ವಾಮಿ ದೇವಾಲಯ ನಿರ್ಮಾಣಕ್ಕೆ 10 ಲಕ್ಷ ರೂ. ಅನುದಾನ ಕೊಡುವುದಾಗಿ ಭರವಸೆ ನೀಡಿದರು..

ತಾಲ್ಲೂಕಿನಲ್ಲಿ ಸರ್ಕಾರದಿಂದ ಮಂಜೂರಾದ ಏತ ನೀರಾವರಿ ಯೋಜನೆಗಳ ಜೊತೆಗೆ ವೈಯಕ್ತಿಕವಾಗಿ ಸುಮಾರು 40ಕ್ಕೂ ಹೆಚ್ಚು ಕೆರೆಗಳನ್ನು ತುಂಬಿಸಲು ಹಣ ನೀಡುವುದಾಗಿ ಹೇಳಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ. ಗೋಪಾಲಸ್ವಾಮಿ ಮಾತನಾಡಿ, ನನ್ನ ಅವಧಿಯಲ್ಲಿ ತಾಲ್ಲೂಕಿನ ಅನೇಕ ದೇವಾಲಯಗಳ ಜೀರ್ಣೋದ್ಧಾರಕ್ಕೆ ಹೆಚ್ಚಿನ ಅನುದಾನ ನೀಡಿದ್ದೇನೆ. ಜೊತೆಗೆ ನೀರಾವರಿ ಯೋಜನೆಗೆ ಸರ್ಕಾರದಿಂದ ಹೆಚ್ಚಿನ ಅನುದಾನ ಬಿಡುಗಡೆ ಮಾಡಿಸುವಲ್ಲಿ ಹೆಚ್ಚು ಶ್ರಮ ವಹಿಸಿರುವುದಾಗಿ ತಿಳಿಸಿದರು.

ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಆಶೀರ್ವಚನ ನೀಡಿದರು.

ಮಂಗಳವಾರ ರಾತ್ರಿ ನಡೆದ ಪೂಜಾ ಕಾರ್ಯಕ್ರಮದಲ್ಲಿ ನೊಣವಿನಕೆರೆ ಕನ್ನಡ ಸಿದ್ದೇಶ್ವರ ಸಂಸ್ಥಾನ ಮಠದ ಡಾ. ಕರಿವೃಷಭದೇಶಿಕೇಂದ್ರ ಸ್ವಾಮೀಜಿ ವಿಶೇಷ ಪೂಜೆ ಸಲ್ಲಿಸಿದರು.

ಮಾಜಿ ಶಾಸಕ ಸಿ.ಎಸ್. ಪುಟ್ಟೇಗೌಡ, ಜೆಡಿಎಸ್ ಮುಖಂಡ ಎನ್. ಆರ್. ಸಂತೋಷ್, ಚನ್ನರಾಯಪಟ್ಟಣ ಯೋಜನಾ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎ.ಸಿ. ಆನಂದ್, ತಾಲ್ಲೂಕು ಅರ್ಚಕರ ಸಂಘದ ಶ್ರೀಧರ್ ಮೂರ್ತಿ, ಸದ್ಗುರು ಡೆವಲಪರ್ಸ್ ಮಾಲೀಕ ಅಣತಿ ಯೋಗೇಶ್, ಉದ್ಯಮಿ ಸುರೇಶ್, ಶ್ರೀ ಕಾಲಭೈರವೇಶ್ವರ ಸ್ವಾಮಿ ಸೇವಾ ಸಮಿತಿ ಅಧ್ಯಕ್ಷ ಬೋರವೆಲ್ ರಾಮಚಂದ್ರು, ಮುಖಂಡರಾದ ಜೈ ರಾಮಣ್ಣ ಇತರರಿದ್ದರು.

## ಕಾಂಗ್ರೆಸ್ ಸಹಿ ಸಂಗ್ರಹ ಅಭಿಯಾನಕ್ಕೆ ವೀರಶೈವ ಸಮಾಜ ಖಂಡನೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕಾಂಗ್ರೆಸ್‌ನಿಂದ ಅ. 28ರಂದು ನಡೆದ ಮತಗಳ್ಳತನ ವಿರೋಧಿ ಸಹಿ ಸಂಗ್ರಹ ಅಭಿಯಾನಕ್ಕೆ ತಾಲ್ಲೂಕು ವೀರಶೈವ ಸಮಾಜ ಆಕ್ರೋಶ ವ್ಯಕ್ತಪಡಿಸಿದೆ.

ಪಟ್ಟಣದ ಬಸವೇಶ್ವರ ಪ್ರತಿಮೆ ಆವರಣದಲ್ಲಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ಮತಗಳ್ಳತನ ವಿರುದ್ಧ ಪ್ರತಿಭಟನೆ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಮೆ ಒಳಭಾಗದಲ್ಲಿ ನಿಂತು ಘೋಷಣೆ ಕೂಗಿರುವುದು ಖಂಡನೀಯ ಎಂದು ಸಮಾಜ ಮುಖಂಡರು ಹೇಳಿದ್ದಾರೆ.

ಮಲೆನಾಡು ವೀರಶೈವ ಸಮಾಜದ ಅಧ್ಯಕ್ಷ ಧರ್ಮಪ್ಪ ಮಾತನಾಡಿ, ಬಸವಣ್ಣನವರ ಪ್ರತಿಮೆಯ ಒಳಾಂಗಣದಲ್ಲಿ ನಿಂತು ರಾಜಕೀಯ ಘೋಷಣೆ ಕೂಗುವುದು ಅಸಹ್ಯಕರ ಹಾಗೂ ಖಂಡನೀಯ. ರಾಜಕೀಯ ಪಕ್ಷಗಳು ತಮ್ಮ ಚಟುವಟಿಕೆ ನಡೆಸುವುದು ಪ್ರಜಾಪ್ರಭುತ್ವದ ಹಕ್ಕಾದರೂ, ಸಮಾಜದ ಧಾರ್ಮಿಕ ಸಂಕೇತವಾದ ಸ್ಥಳದಲ್ಲಿ ಇಂತಹ ಕಾರ್ಯಕ್ರಮ ನಡೆಸುವುದು ಅಸಭ್ಯ ಕೃತ್ಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಸವ ಪುತ್ಥಳಿಯ ಆವರಣದಲ್ಲಿ ಯಾವುದೇ ರಾಜಕೀಯ ಕಾರ್ಯಕ್ರಮಗಳನ್ನು ಮುಂದಿನ ದಿನಗಳಲ್ಲಿ ನಡೆಸಲು ಅವಕಾಶ ನೀಡುವುದಿಲ್ಲ. ಸಮಾಜದ ಮುಂದಿನ ಸಭೆಯಲ್ಲಿ ಈ ಕುರಿತು ನಿರ್ಣಯ ಕೈಗೊಂಡು ಪತ್ರಿಕಾಗೋಷ್ಠಿಯ ಮೂಲಕ ಸಾರ್ವಜನಿಕರಿಗೆ ತಿಳಿಸುತ್ತೇವೆ ಎಂದರು.

ಸಮಾಜದ ಮುಖಂಡ ಎ.ವಿ. ನರೇಶ್ ಮಾತನಾಡಿ, ಬಸವ ಪುತ್ಥಳಿಯ ಬಳಿ ನಡೆದ ಕಾರ್ಯಕ್ರಮದಲ್ಲಿ ಪ್ರಧಾನಿಯವರ ಕುರಿತು ಅವಹೇಳನಕಾರಿ ಹೇಳಿಕೆಗಳು ನಡೆದಿರುವುದು ಖಂಡನೀಯ. ಪುತ್ಥಳಿ ನಿರ್ಮಾಣಕ್ಕೆ ಎಲ್ಲ ಧರ್ಮದವರೂ ಕೊಡುಗೆ ನೀಡಿದ್ದಾರೆ. ಇಂತಹ ಪವಿತ್ರ ಸ್ಥಳದಲ್ಲಿ ರಾಜಕೀಯ ಹೇಳಿಕೆಗಳು ಅನರ್ಹ ಎಂದರು. ಸಮಾಜದ ಅಕ್ಷತಾ ಕೊಡಗಲವಾಡಿ ಮತ್ತಿತರರಿದ್ದರು.

# ಯಸಳೂರು ಗ್ರಾಮಸಭೆ ಬಹಿಷ್ಕರಿಸಿ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಸಕಲೇಶಪುರ: ಗ್ರಾಮಸ್ಥರ ಕುಂದು ಕೊರತೆ ಆಲಿಸುವ ಉದ್ದೇಶದಿಂದ ಹಮ್ಮಿಕೊಂಡಿದ್ದ ಗ್ರಾಮಸಭೆಗೆ ಅಧಿಕಾರಿಗಳು ಗೈರಾದ್ದರಿಂದ ಸಭೆ ಬಹಿಷ್ಕರಿಸಿದ ಘಟನೆ ತಾಲ್ಲೂಕಿನ ಯಸಳೂರು ಗ್ರಾಮ ಪಂಚಾಯಿತಿಯಲ್ಲಿ ಬುಧವಾರ ನಡೆಯಿತು.

ಕೇವಲ ನಾಲ್ಕು ಇಲಾಖೆಗಳ ಅಧಿಕಾರಿಗಳು ಮಾತ್ರ ಹಾಜರಾಗಿದ್ದರು. ಉಳಿದ ಇಲಾಖೆಯ ಯಾರೂ ಬಾರದ ಹಿನ್ನೆಲೆಯಲ್ಲಿ ಸದಸ್ಯರು ಹಾಗೂ ಸಾರ್ವಜನಿಕರು ಗ್ರಾಮ ಪಂಚಾಯಿತಿ ಕಚೇರಿಗೆ ಬೀಗ ಹಾಕಿ ಪ್ರತಿಭಟಿಸಿದರು.

ನಮ್ಮ ಸಮಸ್ಯೆ ಯಾರಿಗೆ ಹೇಳುವುದು. ಯಾರಿಂದ ಮಾಹಿತಿ ಪಡೆಯುವುದೆಂದು ನಾಗರಿಕರು ಪ್ರಶ್ನಿಸಿದರು. ರೈತರಿಗೆ ಸರ್ಕಾರದಿಂದ ದೊರೆಯುವ ಯೋಜನೆಗಳ ಕುರಿತು ಮಾಹಿತಿ ಪಡೆಯಲು ಗ್ರಾಮಸಭೆ ಒಳ್ಳೆಯ ವೇದಿಕೆಯಾಗಿದೆ. ಅದಕ್ಕಾಗಿ ಕೆಲಸ ಬಿಟ್ಟು ಬಂದಿದ್ದೇವೆ. ಅಧಿಕಾರಿಗಳೇ ಗೈರಾಗಿರುವುದು ಯಾವ ನ್ಯಾಯ ಎಂದು ಪ್ರಶ್ನಿಸಿದರು.

ಗ್ರಾ.ಪಂ. ಸದಸ್ಯೆ ಪವಿತ್ರಾ ಮಾತನಾಡಿ, ಗ್ರಾಮದಲ್ಲಿ ಅನೇಕ ಸಮಸ್ಯೆಗಳಿವೆ. ಮುಂದಿನ ದಿನಗಳಲ್ಲಿ ಶಾಸಕರ ಸಮ್ಮುಖದಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ಕರೆಸಿ ಸಭೆ ಮಾಡಬೇಕು. ಆ ಬಳಿಕವಷ್ಟೇ ಗ್ರಾಮಸಭೆಗೆ ಅವಕಾಶ ಕಲ್ಪಿಸಲಾಗುವುದು ಎಂದರು.

ಗ್ರಾಮಸ್ಥ ಸಂಗಮೇಶ್ ಮಾತನಾಡಿ, ಸಭೆ ಕುರಿತು 57 ಇಲಾಖೆಗೆ ಮಾಹಿತಿ ನೀಡಲಾಗಿದ್ದರೂ ಕೇವಲ 4 ಇಲಾಖೆಯವರು ಮಾತ್ರ ಹಾಜರಾಗಿದ್ದಾರೆ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಸಾರ್ವಜನಿಕರು ತೊಂದರೆ ಅನುಭವಿಸುವಂತಾಗಿದೆ. ಮೇಲಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಒತ್ತಾಯಿಸಿದರು.

# ಕೆರೆಕಟ್ಟೆಗೆ ನೀರು ಹರಿಸಿದರೆ ರೈತರ ಬದುಕು ಹಸನು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ನೀರಾವರಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ ಕೆರೆಕಟ್ಟೆಗಳನ್ನು ತುಂಬಿಸುವುದರಿಂದ ರೈತರ ಬದುಕು ಹಸನಾಗುತ್ತದೆ ಎಂದು ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ವಳಗೇರಹಳ್ಳಿ-ಅಣತಿ ಗ್ರಾಮದ ಕೆರೆ ತುಂಬಿ ಕೋಡಿ ಬಿದ್ದ ಹಿನ್ನೆಲೆಯಲ್ಲಿ ಗಂಗೆ ಪೂಜೆ ಬಾಗಿನ ಅರ್ಪಣೆ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದರು.

ಶಾಸಕ ಸಿ.ಎನ್. ಬಾಲಕೃಷ್ಣ ಅವರು ಸರ್ಕಾರದ ನೆರವಿನೊಂದಿಗೆ ತಾಲ್ಲೂಕಿನಲ್ಲಿ ಅನೇಕ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ ಹಲವಾರು ಕೆರೆಕಟ್ಟೆಗಳನ್ನು ತುಂಬಿಸಿದ್ದಾರೆ.

ಅದರಿಂದ ತಾಲ್ಲೂಕಿನ ರೈತರಿಗೆ ಹೆಚ್ಚು ಅನುಕೂಲವಾಗಿದೆ. ಕರೆಕಟ್ಟೆಗಳನ್ನು ತುಂಬಿಸುವುದರಿಂದ ಆರ್ಥಿಕವಾಗಿ ರೈತರು ಸದೃಢಗೊಳ್ಳುವ ಜೊತೆಗೆ ತಾಲ್ಲೂಕು ಕೂಡ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ ಎಂದರು.

ಶಾಸಕ ಸಿ.ಎನ್. ಬಾಲಕೃಷ್ಣ ಮಾತನಾಡಿ. ವಳಗೇರಹಳ್ಳಿ-ಅಣತಿ ಗ್ರಾಮದ ದೊಡ್ಡಕೆರೆ ಸುಮಾರು 1000 ಎಕರೆ ಪ್ರದೇಶದಲ್ಲಿದ್ದು ಜಿಲ್ಲೆಯಲ್ಲೇ ಅತಿ ದೊಡ್ಡ ಎರಡನೇ ಕೆರೆಯಾಗಿದೆ. ಕಳೆದ ಹಲವಾರು ವರ್ಷಗಳಿಂದ ನವಿಲೆ ಏತ ನೀರಾವರಿ ಯೋಜನೆಯಿಂದ ಪೈಪ್ ಲೈನ್ ಮೂಲಕ ಕೆರೆಗೆ ನೀರು ಹರಿಸಲಾಗುತ್ತಿದೆ. ಕೇವಲ ನಮ್ಮ ತಾಲ್ಲೂಕು ಅಲ್ಲದೆ ಗಂಡಸಿ ಸೇರಿದಂತೆ ತಿಪಟೂರು ಭಾಗದ ರೈತರಿಗೂ ಹೆಚ್ಚು ಅನುಕೂಲವಾಗಲಿದೆ. ತಾಲ್ಲೂಕಿನಲ್ಲಿ ಪ್ರಥಮ ಆದ್ಯತೆಯಾಗಿ ಕಳೆದ ಮೂರು ಅವಧಿಗಳಿಂದ ನೀರಾವರಿ ಯೋಜನೆಗಳಿಗೆ ಒತ್ತು ನೀಡಲಾಗುತ್ತಿದೆ ಎಂದು ತಿಳಿಸಿದರು.

ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ತಾಲ್ಲೂಕು ಅರ್ಚಕರ ಸಂಘದ ಅಧ್ಯಕ್ಷ ಶ್ರೀಧರಮೂರ್ತಿ, ಶ್ರೀ ಕಾಲಭೈರವೇಶ್ವರ ಸೇವಾ ಸಮಿತಿ ಅಧ್ಯಕ್ಷ ಬೋರವೆಲ್ ರಾಮಚಂದ್ರು, ಕೃಷಿ ಪತ್ತಿನ ನಿರ್ದೇಶಕ ವಿ.ಸಿ. ಗಿರೀಶ್, ಮುಖಂಡರಾದ ಜಯರಾಮಣ್ಣ, ಶಿವೇಗೌಡ, ಹುಲಿಕೆರೆ ಸಂಪತ್ ಕುಮಾರ್, ಗಿರೀಶ್ ಇತರರಿದ್ದರು.

# ಅಭಿವೃದ್ಧಿ ಕಾಮಗಾರಿಗೆ ಸಂಸದರಿಂದ ಭೂಮಿಪೂಜೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಂಸದ ಶ್ರೇಯಸ್ ಪಟೇಲ್ ಅವರು ಬುಧವಾರ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಸಂಸದರ ಸ್ಥಳೀಯ ಕ್ಷೇತ್ರಾಭಿವೃದ್ಧಿ ಅನುದಾನದಡಿ ಸುಮಾರು 50 ಲಕ್ಷ ರೂ. ವೆಚ್ಚದ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಐಚನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಟ್ಟನಹಳ್ಳಿ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ (ಯಂತ್ರೋಪಕರಣ)ಕ್ಕೆ ಅಳವಡಿಸುವ ಕಾಮಗಾರಿ, ಲಕ್ಷ್ಮಿಪುರದಲ್ಲಿ ಬಸ್ ನಿಲ್ದಾಣ, ಪಡುವಲಹಿಪ್ಪೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಾರಗೌಡನಹಳ್ಳಿ ಗ್ರಾಮದಲ್ಲಿ ಬಸ್ ನಿಲ್ದಾಣ ನಿರ್ಮಾಣ, ಬಿಲ್ಲೇನಹಳ್ಳಿಯಲ್ಲಿ ರಸ್ತೆ ಅಭಿವೃದ್ಧಿ ಹಾಗೂ ಚಿಗಳ್ಳಿಯಲ್ಲಿ ಸಮುದಾಯ ಭವನ ನಿರ್ಮಾಣ ಕಾಮಗಾರಿ ಮತ್ತು ಲಕ್ಕೂರು ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣಕ್ಕೆ ಪೂಜೆ ಸಲ್ಲಿಸಿದರು.

ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಸಂಸದರ ಸ್ಥಳೀಯ ಅಭಿವೃದ್ಧಿ ಅನುದಾನದಡಿ ಗ್ರಾಮೀಣ ಪ್ರದೇಶಗಳಿಗೆ ಸೌಕರ್ಯ ಕಲ್ಪಿಸಲು ಕ್ರಮ ವಹಿಸಲಾಗಿದೆ. ಕ್ಷೇತ್ರದ ಜನರ ಋಣ ನನ್ನ ಮೇಲಿದೆ. ನಮ್ಮ ಕುಟುಂಬ ಹಾಗೂ ನನ್ನ ಮೇಲೆ ವಿಶ್ವಾಸವಿಟ್ಟು ಮತ ನೀಡಿ ಗೆಲ್ಲಿಸಿದ್ದಾರೆ. ಚುನಾವಣೆ ಪೂರ್ವದಲ್ಲಿ ಕೊಟ್ಟಂತಹ ಭರವಸೆಗಳನ್ನು ಈಡೇರಿಸುವುದು ನನ್ನ ಜವಾಬ್ದಾರಿ. ಆದ್ದರಿಂದ ಹಂತ ಹಂತವಾಗಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಗುಣಮಟ್ಟದ ಕಾಮಗಾರಿಗೆ ಆದ್ಯತೆ ನೀಡುವಂತೆ ಅಧಿಕಾರಿ ಹಾಗೂ ಗುತ್ತಿಗೆದಾರರಿಗೆ ಸೂಚಿಸಿದ್ದೇನೆ ಎಂದರು.

ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ರಾಜ್ಯದಲ್ಲಿ ಅಸ್ತಿತ್ವಕ್ಕೆ ಬಂದ ತಕ್ಷಣ ವರ್ಷಕ್ಕೆ 56,000 ಕೋಟಿ ರೂ. ವೆಚ್ಚ ಮಾಡಿ ಕೋಟ್ಯಂತರ ಕುಟುಂಬಗಳಿಗೆ ಅನುಕೂಲವಾಗುವಂತೆ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲಾಗಿದೆ ಎಂದು ತಿಳಿಸಿದರು.

ಸಂವಿಧಾನ ಶಿಲ್ಪಿ ಡಾ. ಬಿ.ಆರ್ .ಅಂಬೇಡ್ಕರ್ ಅವರ ಆದರ್ಶ ಮತ್ತು ತತ್ವಗಳನ್ನು ಕಡ್ಡಾಯವಾಗಿ ಪಾಲಿಸುವುದರ ಮೂಲಕ ಸಂವಿಧಾನದ ಆಶಯವನ್ನು ಯಥಾವತ್ತಾಗಿ ಜಾರಿಗೊಳಿಸುವ ವಿಷಯದಲ್ಲಿ ಎಲ್ಲರ ಆಲೋಚನೆ ಸಕಾರಾತ್ಮಕವಾಗಿ ಸಾಗಬೇಕು. ಸಂವಿಧಾನದ ಮಹತ್ವ ಮತ್ತು ಪೀಠಿಕೆಯ ಸಾರವನ್ನು ಸೂಕ್ಷ್ಮವಾಗಿ ಅರ್ಥ ಮಾಡಿಕೊಳ್ಳುವುದರ ಮೂಲಕ ತಮ್ಮ ಬದುಕನ್ನು ಮಾದರಿಯಾಗಿ ರೂಪಿಸಿಕೊಳ್ಳಬೇಕು ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಟಿ. ಲಕ್ಷ್ಮಣ್, ಪುರಸಭೆ ಮಾಜಿ ಅಧ್ಯಕ್ಷ ಹೆಚ್ .ವಿ.ಪುಟ್ಟರಾಜು, ಅಭಿಯಂತರರಾದ ಪ್ರಶಾಂತ್, ಪಾರ್ವತಿ, ಮುಖಂಡರಾದ ರವಿಕುಮಾರ್, ಬಸವರಾಜು, ಕೃಷ್ಣಪ್ಪ, ಶಿವಣ್ಣ ಇತರರಿದ್ದರು.

## ಭ್ರಷ್ಟಾಚಾರ ಮುಕ್ತ ಸಮಾಜ ಲೋಕಾಯುಕ್ತ ಗುರಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಭ್ರಷ್ಟಾಚಾರ ಮುಕ್ತ ಸಮಾಜ ನಿರ್ಮಾಣವೇ ಲೋಕಾಯುಕ್ತ ಸಂಸ್ಥೆಯ ಗುರಿ ಎಂದು ಲೋಕಾಯುಕ್ತ ಡಿವೈಎಸ್‌ಪಿ ಸುರೇಶ್ ಹೇಳಿದರು.

ನಗರದ ಮಲೆನಾಡು ತಾಂತ್ರಿಕ ಕಾಲೇಜು ಸಭಾಂಗಣದಲ್ಲಿ ಬುಧವಾರ ಕರ್ನಾಟಕ ಲೋಕಾಯುಕ್ತದಿಂದ ಏರ್ಪಡಿಸಿದ್ದ ಜಾಗೃತಿ ಅರಿವು ಸಪ್ತಾಹ ಉದ್ಘಾಟಿಸಿ ಮಾತನಾಡಿ, 1984ರಲ್ಲಿ ಕರ್ನಾಟಕ ಲೋಕಾಯುಕ್ತ ಪೊಲೀಸ್ ಇಲಾಖೆ ಆರಂಭವಾಯಿತು. ಯಾವುದೇ ರೀತಿಯಲ್ಲಿ ಲಂಚ ಪಡೆಯುವುದು ಖಂಡನೀಯ. ಲಂಚ ಪಡೆಯದೆ ಕೆಲಸ ನಿರ್ವಹಿಸುವುದು ಅಧಿಕಾರಿ, ಚುನಾಯಿತ ಪ್ರತಿನಿಧಿಗಳ ಕರ್ತವ್ಯವೆ ಎಂದರು.

ಲಂಚ ಮುಕ್ತ ಸಮಾಜ ನಿರ್ಮಾಣ ಲೋಕಾಯುಕ್ತ ಸಂಸ್ಥೆಯ ಗುರಿಯಾಗಿದೆ. ಆಸೆ, ದುರಾಸೆಗೆ ಬಲಿಯಾಗಬಾರದು. ಸರ್ಕಾರದ ಕೆಲಸ ಮಾಡಿಕೊಡಲು ಯಾರಾದರೂ ಲಂಚ ಕೇಳಿದರೆ ಸಾರ್ವಜನಿಕರು ಹಿಂಜರಿಕೆ ಇಲ್ಲದೆ ದೂರು ನೀಡಬಹುದು. ದೂರುದಾರರ ಮಾಹಿತಿಯನ್ನು ಗೌಪ್ಯವಾಗಿಡಲಾಗುತ್ತದೆ. ಜೊತೆಗೆ ತಪ್ಪಿತಸ್ಥರನ್ನು ಕಾನೂನು ಪ್ರಕಾರ ಶಿಕ್ಷೆಗೆ ಗುರಿಪಡಿಸಲಾಗುತ್ತದೆ ಎಂದು ತಿಳಿಸಿದರು.

ಪ್ರಭಾರ ಪ್ರಾಂಶುಪಾಲ ಡಾ. ಹೆಚ್.ಎನ್. ನರಸಿಂಹನ್ ಅಧ್ಯಕ್ಷತೆ ವಹಿಸಿದ್ದರು. ವಿದ್ಯಾರ್ಥಿ ಕ್ಷೇಮಾಧಿಕಾರಿ ಡಾ. ಇಂದಿರಾ ಬಹದ್ದೂರ್, ಎನ್‌ಎಸ್‌ಎಸ್ ಅಧಿಕಾರಿ ಡಾ. ವಿಜಯ್ ಕುಮಾರ್, ರಿಜಿಸ್ಟ್ರಾರ್ ಕುಮುದ ಇತರರಿದ್ದರು.

## ಪ್ಯಾರಾ ಸ್ವಿಮ್ಮಿಂಗ್: ಅಂಗವಿಕಲ ವಿದ್ಯಾರ್ಥಿ ಸಾಧನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಕರ್ನಾಟಕ ಪ್ಯಾರಾ ಸ್ವಿಮ್ಮಿಂಗ್ ಅಸೋಸಿಯೇಷನ್ ವತಿಯಿಂದ ಬೆಂಗಳೂರಿನಲ್ಲಿ ಇತ್ತೀಚೆಗೆ ನಡೆದ ರಾಜ್ಯ ಮಟ್ಟದ ಪ್ಯಾರಾ ಸ್ವಿಮ್ಮಿಂಗ್ ಸ್ಪರ್ಧೆಯಲ್ಲಿ ನಗರದ ಹಿತನ್‌ಗೌಡ ಮೂರು ಪದಕಗಳನ್ನು ಗೆದ್ದು ರಾಷ್ಟ್ರ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

100 ಮೀ. ಫ್ರಿ ಸ್ಟೈಲ್‌ನಲ್ಲಿ ಪ್ರಥಮ ಸ್ಥಾನ ಪಡೆದು ಚಿನ್ನ, 50 ಮೀ. ಬಟರ್ ಫ್ಲೈ ಸ್ಪರ್ಧೆಯಲ್ಲಿ ದ್ವಿತೀಯ (ಬೆಳ್ಳಿ) ಹಾಗು 50 ಮೀ. ಫ್ರಿ ಸ್ಟೈಲ್‌ನಲ್ಲಿ ಮೂರನೇ ಸ್ಥಾನ (ಕಂಚು) ತಮ್ಮದಾಗಿಸಿಕೊಂಡಿದ್ದಾರೆ. ನಗರದ ಕುವೆಂಪು ನಗರದ ನಿವಾಸಿಗಳಾದ ರವಿಕುಮಾರ್ ಹಾಗೂ ವೀಣಾ ದಂಪತಿ ಪುತ್ರ ಹಿತನ್‌ಗೌಡ ಆಕ್ಸ್‌ಫರ್ಡ್ ಶಾಲೆಯಲ್ಲಿ 8ನೇ ತರಗತಿ ವ್ಯಾಸಂಗ ಮಾಡುತ್ತಿದ್ದಾನೆ. 9ನೇ ವರ್ಷದವನಿದ್ದಾಗಲೇ ಎರಡೂ ಕಾಲುಗಳ ಸ್ವಾಧೀನ ಕಳೆದುಕೊಂಡ ಬಾಲಕ ದೈಹಿಕ ಸವಾಲುಗಳನ್ನು ಮೆಟ್ಟಿ ನಿಂತಿರುವುದು ಸಾಧನೆಯೇ ಸರಿ.

ಹಿತನ್‌ಗೌಡ ಅವರ ಸಾಧನೆಗೆ ದಿವ್ಯಾಂಗ ಪ್ಯಾರಾ ಸ್ಪೋರ್ಟ್ಸ್ ಅಸೋಸಿಯೇಷನ್ ಮುಖ್ಯಸ್ಥೆ ಕಮಲಾಕ್ಷಿ, ಮಹಾದೇವ್, ಗಿರೀಶ್, ಮಾದೇಶ ಚಂದ್ರ, ಗೋಪಿನಾಥ್, ದಿವಾಕರ, ಸತ್ಯನಾರಾಯಣ, ಸ್ವಿಮ್ಮಿಂಗ್ ತರಬೇತುದಾರರಾದ ನಾಗರಾಜ್, ಕಿರಣ್ ಹಾಗೂ ಮದನ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ರಾಜ್ಯ ಮಟ್ಟದ ಬಾಕ್ಸಿಂಗ್ ಸ್ಪರ್ಧೆಗೆ ಮೂವರು ವಿದ್ಯಾರ್ಥಿಗಳು ಆಯ್ಕೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪದವಿ ಪೂರ್ವ ಕಾಲೇಜುಗಳ ರಾಜ್ಯ ಮಟ್ಟದ ಬಾಕ್ಸಿಂಗ್ ಪಂದ್ಯಾವಳಿಗೆ ಅಮೆಚೂರ್ ಬಾಕ್ಸಿಂಗ್ ಸಂಸ್ಥೆಯ ಮೂವರು ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ.

ಚಿಪ್ಪಿನಕಟ್ಟೆ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಮೊಹಮ್ಮದ್ ಫೈಜ್, ವಿದ್ಯಾನಿಕೇತನ ಕಾಲೇಜಿನ ಮೊಹಮ್ಮದ್ ಸುಜೇನ್, ಜಿ.ಎಂ. ಕಾಲೇಜಿನ ವಿದ್ಯಾರ್ಥಿನಿ ಬಿ.ಬಿ. ಹಲಿಮಾ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಹಾಸನದ ಹೋಲಿಮೌಂಟ್ ಶಾಲೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಮತ್ತು ಜಿಲ್ಲಾ ಅಮೆಚೂರ್ ಬಾಕ್ಸಿಂಗ್ ಸಂಸ್ಥೆ ವತಿಯಿಂದ ಪದವಿ ಪೂರ್ವ ಕಾಲೇಜುಗಳ 19 ವರ್ಷ ವಯೋಮಿತಿ ಒಳಗಿನ ಜಿಲ್ಲಾ ಮಟ್ಟದ ಬಾಲಕ-ಬಾಲಕಿಯರ ಬಾಕ್ಸಿಂಗ್ ಪಂದ್ಯಾವಳಿ ಇತ್ತೀಚೆಗೆ ನಡೆಯಿತು.

ನ. 27 ಮತ್ತು 28ರಂದು ಶಿವಮೊಗ್ಗದಲ್ಲಿ ಪದವಿ ಪೂರ್ವ ಕಾಲೇಜುಗಳ ರಾಜ್ಯ ಮಟ್ಟದ ಬಾಕ್ಸಿಂಗ್ ಪಂದ್ಯಾವಳಿ ನಡೆಯಲಿದೆ. ಮಹಮ್ಮದ್ ಆರೀಫ್ ವಿದ್ಯಾರ್ಥಿಗಳಿಗೆ ತರಬೇತಿ ನೀಡಿದ್ದಾರೆ.

# ಅರ್ಥಪೂರ್ಣ ಕನ್ನಡ ರಾಜ್ಯೋತ್ಸವಕ್ಕೆ ಜಿಲ್ಲಾಧಿಕಾರಿ ನಿರ್ದೇಶನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ಕನ್ನಡ ರಾಜ್ಯೋತ್ಸವವನ್ನು ಅರ್ಥ ಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕನ್ನಡ ರಾಜ್ಯೋತ್ಸವ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಿಲ್ಲಾ ಕ್ರೀಡಾಂಗಣದ ಹಾಕಿ ಮೈದಾನದಲ್ಲಿ ನ.1 ರಂದು ಬೆಳಿಗ್ಗೆ 9 ಗಂಟೆಗೆ ನಡೆಯಲಿರುವ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮಕ್ಕೆ ಶಿಷ್ಟಾಚಾರದಂತೆ ಜನಪ್ರತಿನಿಧಿಗಳನ್ನು ಆಹ್ವಾನಿಸಲು ಸೂಚಿಸಿದರಲ್ಲದೆ ಯಾವುದೇ ಲೋಪವಾಗದಂತೆ ಎಚ್ಚರ ವಹಿಸಲು ನಿರ್ದೇಶನ ನೀಡಿದರು.

ಜಿಲ್ಲಾ ಕ್ರೀಡಾಂಗಣದಲ್ಲಿ ಆಕರ್ಷಕ ಪಥಸಂಚಲನ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ಮೂಡಿಬರಲು ತಾಲೀಮು ನಡೆಸುವಂತೆ ಸೂಚಿಸಿದರಲ್ಲದೆ, ಸರ್ಕಾರಿ ಶಾಲೆಗಳ ಮಕ್ಕಳು ಹೆಚ್ಚು ಸಂಖ್ಯೆಯಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿ ಎಂದು ತಿಳಿಸಿದರು.

ಕನ್ನಡ ರಾಜ್ಯೋತ್ಸವ ಆಚರಣೆ ಸಂಬಂದ ರಚಿಸಿರುವ ಉಪ ಸಮಿತಿಗಳು ತಮ್ಮ ತಮ್ಮ ಕರ್ತವ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಎಲ್ಲಾ ಸರ್ಕಾರಿ ಕಚೇರಿಗಳ ಒಳ ಮತ್ತು ಹೊರ ಆವರಣಗಳ ಸ್ವಚ್ಚತೆಗೆ ಕ್ರಮವಹಿಸುವುದರ ಜೊತೆಗೆ ಕಟ್ಟಡಗಳ ದೀಪಾಲಂಕಾರಕ್ಕೂ ಕೂಡ ಸೂಚನೆ ನೀಡಿದರು.

ವೀಲ್ ಚೇರ್, ಕುಡಿಯುವ ನೀರಿನ ವ್ಯವಸ್ಥೆ, ನಿರಂತರ ವಿದ್ಯುತ್ ಸಂಪರ್ಕಕ್ಕೆ ಕ್ರಮ ವಹಿಸುವಂತೆ ತಿಳಿಸಿದರಲ್ಲದೆ, ಶೌಚಾಲಯಗಳ ಕುರಿತು ಸೈನ್ ಬೋರ್ಡ್ ಹಾಬೇಕು. ಕನ್ನಡ ನಾಡು ನುಡಿ ಬಗ್ಗೆ ಅಭಿಮಾನ ಮೂಡಿಸುವ ಗೀತೆಗಳ ಮೂಲಕ ಶಾಲಾ ವಿದ್ಯಾರ್ಥಿಗಳಿಂದ ನಿಗಧಿತ ಅವಧಿಯೊಳಗೆ ಸಾಂಸ್ಕೃತಿಕ ಕಾರ್ಯಕ್ರಮ ನೀಡಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಯೂತ್ ಫೌಂಡೇಶನ್ ಹಾಗೂ ಜಿಲ್ಲಾಡಳಿತದ ವತಿಯಿಂದ ಈ ಬಾರಿ ವಿಶೇಷವಾಗಿ 2500 ಅಡಿ ಉದ್ದದ ಕನ್ನಡ ಬಾವುಟವನ್ನು ಜಿಲ್ಲಾಧಿಕಾರಿ ಕಚೇರಿ ಆವರಣದಿಂದ ಅಂದು ಬೆಳಗ್ಗೆ 8 ಗಂಟೆಗೆ ಪ್ರಾರಂಭಿಸಿ ಜಿಲ್ಲಾ ಕ್ರೀಡಾಂಗಣದವರೆಗೆ ಕೊಂಡೊಯ್ಯಲು ಪದವಿ, ನಸಿಂಗ್ ಹಾಗೂ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳನ್ನು ಭಾಗವಹಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಮಕ್ಕಳ ಸುರಕ್ಷತೆ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಂಜುನಾಥ್, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಬಾಬು, ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

## ಶೀಘ್ರ ಕಡತ ವಿಲೇವಾರಿಗೆ ಸೂಚನೆ

ಹಾಸನಾಂಬ ಜಾತ್ರಾ ಮಹೋತ್ಸವ ಹಿನ್ನೆಲೆಯಲ್ಲಿ ಎರಡು ವಾರಗಳ ಕಾಲ ವಿಲೇವಾರಿಗೆ ಬಾಕಿ ಇರುವ ಕಡತಗಳನ್ನು ಶೀಘ್ರ ವಿಲೆಗಾಗಿ ಆಂದೋಲನದ ರೀತಿಯಲ್ಲಿ ಕ್ರಮವಹಿಸುವಂತೆ ಎಲ್ಲಾ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಮಳೆಯಿಂದ ಹಾನಿಯಾಗಿರುವ ಬೆಳೆ ನಷ್ಟ, ಶಾಲೆ, ಅಂಗನವಾಡಿ ಕಟ್ಟಡಗಳ ಹಾನಿಯ ಬಗ್ಗೆ ಮಾಹಿತಿ ಸಿದ್ದಪಡಿಸಿ ವರದಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಪ್ರತಿಯೊಂದು ಹಾಸ್ಟೆಲ್ ಗೆ ನೋಡಲ್ ಅಧಿಕಾರಿಯನ್ನು ನೇಮಿಸಿ ಅನಿರೀಕ್ಷಿತ ಭೇಟಿ ನೀಡಿ ಮಕ್ಕಳ ಸುರಕ್ಷತೆ, ಆಹಾರದ ಗುಣಮಟ್ಟ, ಮೂಲಭೂತ ಸೌಕರ್ಯಗಳ ಬಗ್ಗೆ ಪರಿಶೀಲಿಸಿ ವರದಿ ನೀಡಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಹಾಸನಾಂಬ ಜಾತ್ರಾ ಮಹೋತ್ಸವದಲ್ಲಿ ಎಲ್ಲಾ ಇಲಾಖೆಯ ಅಧಿಕಾರಿಗಳು ತಮಗೆನೀಡಿರುವ ಜವಾಬ್ದಾರಿಯನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸಿ ಜಾತ್ರಾ ಮಹೋತ್ಸವವನ್ನು ಯಶಸ್ವಿಗಳಿಸಿದ್ದಾರೆ. ಅದರಲ್ಲಿಯೂ ಆರೋಗ್ಯ ಇಲಾಖೆಯು ತಕ್ಷಣ ಸ್ಪಂದಿಸಿ ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆಯನ್ನು ನೀಡಿದ್ದಾರೆ ಎಂದು ಹೊರ ಜಿಲ್ಲೆಯಿಂದ ಆಗಮಿಸಿದ್ದ ಭಕ್ತಾಧಿಗಳು ತಮಗೆ ಫೋನ್ ಕರೆ ಮೂಲಕ ತಿಳಿಸಿದರು ಎಂದು ಜಿಲ್ಲಾಧಿಕಾರಿಯವರು ಪ್ರಶಂಸೆಯನ್ನು ವ್ಯಕ್ತಪಡಿಸಿದರು.

# ಭೈರವೇಶ್ವರ ದೇವಾಲಯ ರಕ್ಷಣೆಯ ಭರವಸೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ : ತಾಲ್ಲೂಕಿನ ಭಕ್ತಿಯ ಮಹಾಸ್ಥಾನವಾದ ಬೆಟ್ಟದ ಭೈರವೇಶ್ವರ ದೇವಾಲಯ ಮತ್ತು ಐತಿಹಾಸಿಕ ಚೌಡಿಗುಡಿ ರಕ್ಷಣೆಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಕರ್ನಾಟಕ ರಕ್ಷಣಾ ವೇದಿಕೆ ತಾಲ್ಲೂಕು ಘಟಕ ಮನವಿ ಸಲ್ಲಿಸಿದೆ.

ವೇದಿಕೆಯ ಅಧ್ಯಕ್ಷ ಗಗನ್ ಗೌಡ ಮಾತನಾಡಿ, ದೇವಾಲಯಕ್ಕೆ ಭದ್ರತಾ ಗಾರ್ಡ್ ನೇಮಕ, ಗೇಟ್ ವ್ಯವಸ್ಥೆ, ಚೌಡಿಗುಡಿ ಪ್ರದೇಶಕ್ಕೆ ನಿಗಾವ್ಯವಸ್ಥೆ, ಸೌಕರ್ಯಗಳ ಸುಧಾರಣೆ ಸೇರಿದಂತೆ ಶೌಚಾಲಯ ನಿರ್ಮಾಣ ಮಾಡಬೇಕೆಂದು ಒತ್ತಾಯಿಸಿದರು.

ಇತ್ತೀಚೆಗೆ ಯಾರೋ ಚೌಡಿಗುಡಿಯ ಕಲ್ಲನ್ನು ಕೇಡಿನ ಉದ್ದೇಶದಿಂದ ತೆಗೆದುಕೊಂಡು ಹೋಗಿರುವ ಘಟನೆ ಭಕ್ತರಲ್ಲಿ ಕಳವಳ ಹುಟ್ಟಿಸಿದೆ. ಪ್ರವಾಸಿಗರ ಸಂಚಾರ ಹೆಚ್ಚಾಗಿರುವ ಸಂದರ್ಭದಲ್ಲೂ ಭದ್ರತಾ ವ್ಯವಸ್ಥೆಗಳ ಕೊರತೆ ಇರುವುದರಿಂದ ದೇವಾಲಯದ ಗೌರವಕ್ಕೆ ಅಪಾಯ ಉಂಟಾಗುತ್ತಿದೆ ಎಂದು ಹೇಳಿದರು.

ತಾಲೂಕು ತಹಸೀಲ್ದಾರ್ ರವರು ಈ ಮನವಿಯನ್ನು ಸ್ವೀಕರಿಸಿ, ಭಕ್ತರ ಭಾವನೆ ಕಾಪಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಭರವಸೆ ನೀಡಿದರು.

ಕಾರ್ಮಿಕ ಘಟಕದ ಅಧ್ಯಕ್ಷ ಸಂಗ್ರಾಮ್ ಹೊಡ್ಚಳ್ಳಿ, ನಗರ ಘಟಕದ ಅಧ್ಯಕ್ಷ ಪ್ರಜ್ವಲ್, ಕಸಬಾ ಹೋಬಳಿ ಅಧ್ಯಕ್ಷ ಸಿದ್ದಾಂತ ಪಟೇಲ್, ತಾಲ್ಲೂಕು ಕಾರ್ಯದರ್ಶಿ ನವೀನ ನೆಲಗಳ್ಳಿ, ಯುವ ಘಟಕದ ಉಪಾಧ್ಯಕ್ಷ ರತನ್, ರೈತ ಘಟಕದ ಉಪಾಧ್ಯಕ್ಷ ಸ್ವಾಗತ್, ಉಪಾಧ್ಯಕ್ಷ ಸುಧೀರ್, ವರುಣ್ ಇತರರಿದ್ದರು.

# ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದಲ್ಲಿ ಅಭಿವೃದ್ಧಿ ಪರ್ವ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಂಸದ ಶ್ರೇಯಸ್ ಪಟೇಲ್ ಅವರು ಸಂಸದರ ಸ್ಥಳೀಯ ಕ್ಷೇತ್ರಾಭಿವೃದ್ಧಿ ಅನುದಾನದಡಿ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ರಸ್ತೆ, ಅಂಗನವಾಡಿ, ಸಮುದಾಯ ಭವನ, ಶುದ್ಧ ಕುಡಿಯುವ ನೀರಿನ ಘಟಕ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಕಬ್ಬಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು. ಬಳಿಕ ದುದ್ದ ಹೋಬಳಿ ಗೌರಿಪುರ ಹಾಗೂ ಮಹದೇವರಹಳ್ಳಿ ರಸ್ತೆ ಕಾಮಗಾರಿಗೆ ಚಾಲನೆ ನೀಡಿದರು. ಈ ವೇಳೆ ಮಾತನಾಡದ ಅವರು, ಗ್ರಾಮೀಣ ಭಾಗದ ರಸ್ತೆಗಳು ಅಭಿವೃದ್ಧಿಗೆ ಪೂರಕವಾಗಿದೆ. ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟನಲ್ಲಿ ದಿಟ್ಟ ಕ್ರಮ ಕೈಗೊಳ್ಳಲಾಗಿದೆ. ನಿಗದಿತ ಗಡುವಿನೊಳಗೆ ಗುಣಮಟ್ಟದ ರಸ್ತೆ ನಿರ್ಮಿಸಿಕೊಡುವಂತೆ ಗುತ್ತಿಗೆದಾರರು ಹಾಗೂ ಅಧಿಕಾರಿಗಳಿಗೆ ಸೂಚನೆ ನೀಡಿದರು.

ದುದ್ದ ಹೋಬಳಿ ಬಸವಾಘಟ್ಟ ಗ್ರಾಮ ಪಂಚಾಯಿತಿಗೆ ಒಳಪಡುವ ಚಿಗಟಿಹಳ್ಳಿಯಲ್ಲಿ ಸಿಸಿ ಮುಖ್ಯ ರಸ್ತೆ, ಬಸವಾಘಟ್ಟ ರಸ್ತೆ ಹಾಗೂ ಬೈರಾಪುರ ಸಮುದಾಯ ಭವನದ ಅಡುಗೆ ಮನೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು. ನಾನು ಗ್ರಾಮಗಳಿಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಸಾರ್ವಜನಿಕರು ಈ ಬಗ್ಗೆ ಗಮನಕ್ಕೆ ತಂದಿದ್ದರು. ಜೊತೆಗೆ ಬೈರಾಪುರದಲ್ಲಿ ಸಮುದಾಯ ಭವನ ಇದ್ದರೂ ಅಡುಗೆ ಮನೆ ಇಲ್ಲದೆ ತೊಂದರೆಯಾಗುತ್ತಿತ್ತು. ಈ ಕಾಮಗಾರಿ ಕೈಗೊಂಡಿರುವುದರಿಂದ ಮುಂದಿನ ದಿನಗಳಲ್ಲಿ ಮದುವೆ, ನಾಮಕರಣ ಮತ್ತಿತರ ಶುಭ ಸಮಾರಂಭಗಳಿಗೆ ಇದರಿಂದ ನೆರವಾಗುತ್ತದೆ. ಸಾರ್ವಜನಿಕರ ಹಿತದೃಷ್ಟಿಯಿಂದ ಕಾಮಗಾರಿ ಕೈಗೆತ್ತಿಕೊಂಡಿದ್ದು ಶೀಘ್ರ ಬಳಕೆಗೆ ಲಭ್ಯವಾಗಲಿದೆ ಎಂದು ಭರವಸೆ ನೀಡದರು. ದುದ್ದ ಹೋಬಳಿ ಅಟ್ಟಾವರ ಹೊಸಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಮ್ಲಾಪುರ ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣ, ಎಂ.ಡಿ. ಹೊಸೂರು ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಹಾಗು ಮುದಿಗೆರೆಯಲ್ಲಿ ಅಂಗನವಾಡಿ ಕಟ್ಟಡ ಕಾಮಗಾರಿ ಕೈಗೊಳ್ಳಲಾಯಿತು. ಮೆಳಗೋಡು ಗ್ರಾಮ ಪಂಚಾಯಿತಿಗೆ ಸೇರುವ ಚೌರಿಕೊಪ್ಪಲು ಗ್ರಾಮದಲ್ಲಿ ಸಮುದಾಯ ಭವನ ನಿರ್ಮಾಣ, ಕೋರವಂಗಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜಕ್ಕೇನಹಳ್ಳಿ ಗ್ರಾಮದಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು. ಈ ವೇಳೆ ಪಕ್ಷದ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಫಸಲು ಕಟಾವಿಗೆ ಅಡ್ಡಿಯಾದ ಅಕಾಲಿಕ ಮಳೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಬಿಳಿಸುಳಿ ರೋಗ ಬಾಧೆಗೆ ಸಿಲುಕಿ ಅಪಾರ ಪ್ರಮಾಣದ ಮುಸುಕಿನ ಜೋಳ ಕಳೆದುಕೊಂಡಿರುವ ರೈತರು, ಶ್ರಮವಹಿಸಿ ಉಳಿಸಿಕೊಂಡಿರುವ ಅಲ್ಪ ಫಸಲು ಕಟಾವಿಗೆ ಹವಾಮಾನ ವೈಪರೀತ್ಯ, ನಿರಂತರ ಮಳೆ ಅಡ್ಡಿಯುಂಟು ಮಾಡಿದೆ.

ಸಾಮಾನ್ಯವಾಗಿ ಅಕ್ಟೋಬರ್ ತಿಂಗಳಿಗೆ ಮುಂಗಾರು ಅಂತ್ಯಗೊಳ್ಳಬೇಕಿತ್ತು. ಆದರೆ, ವಾಯುಭಾರ ಕುಸಿತದಿಂದ ಜಿಲ್ಲೆಯಲ್ಲಿ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ ಕೃಷಿ ಚಟುವಟಿಕೆಗೆ ದೊಡ್ಡ ತೊಂದರೆ ಎದುರಾಗಿದೆ. ಮೆಕ್ಕೆಜೋಳ ಕಟಾವು ಕಾಲವಾಗಿರುವ ಈ ಸಂದರ್ಭದಲ್ಲಿ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ, ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದೆ.

ಅಲ್ಪ ಅವಧಿ ಬೆಳೆಯಾಗಿರುವ ಮುಸುಕಿನ ಜೋಳವನ್ನು ಹಾಸನ, ಹೊಳೆನರಸೀಪುರ, ಆಲೂರು, ಬೇಲೂರು, ಚನ್ನರಾಯಪಟ್ಟಣ ಮತ್ತು ಅರಕಲಗೂಡು ತಾಲ್ಲೂಕುಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬೆಳೆಯಲಾಗುತ್ತದೆ. ಆದರೆ, ಈ ಬಾರಿ ಹೆಚ್ಚು ಮಳೆಯ ಕಾರಣದಿಂದ ಬಿಳಿಸುಳಿ ರೋಗ ವ್ಯಾಪಕವಾಗಿ ಹರಡಿದ್ದರಿಂದ ಅಪಾರ ಪ್ರಮಾಣದ ಬೆಳೆ ನಾಶವಾಗಿತ್ತು.

ಬಿತ್ತನೆ ಮಾಡಿದ್ದ ಜೋಳ ಮೊಳಕೆ ಬಾರದೆ ಇದ್ದರಿಂದ ಪುನಃ ಉಳುಮೆ ಮಾಡಿ ಬಿತ್ತನೆ ಮಾಡಲಾಗುತ್ತು. ಅದು ಕೂಡ ಅರ್ಧದಷ್ಟು ನಾಶವಾಗಿದೆ. ಜಿಲ್ಲೆಯಲ್ಲಿ ಕಾಡ್ಗಿಚ್ಚಿನಂತೆ ಹರಡಿದ್ದ ಬಿಳಿಸುಳಿ ರೋಗ ರೈತರನ್ನು ತೀವ್ರವಾಗಿ ಕಂಗೆಡಿಸಿದ್ದರಿಂದ ಅಧ್ಯಾಯನಕ್ಕಾಗಿ ರಾಜ್ಯ, ಹೊರ ರಾಜ್ಯಗಳ ಕೃಷಿ ಸಂಶೋಧಕರು, ತಜ್ಞರ ತಂಡ ಜಿಲ್ಲೆಗೆ ಆಗಮಿಸಿ ಪರಿಶೀಲನೆ ನಡೆಸಿತ್ತು. ಹವಮಾನ ವೈಪರೀತ್ಯ, ಭಾರೀ ಮಳೆ, ಶೀತದ ವಾತಾವರಣ, ಫಂಗಸ್‌ನಿಂದ ರೋಗ ಹರಡಿದೆ. ಮುಂದಿನ ದಿನಗಳಲ್ಲಿ ಜೋಳ ಬೆಳೆಯುವುದು ಸೂಕ್ತವಲ್ಲ, ಪರ್ಯಾಯ ಬೆಳೆಯತ್ತ ರೈತರು ಗಮನ ಹರಿಸಬೇಕೆಂದು ಆತಂಕಕಾರಿ ವರದಿ ನೀಡಿತ್ತು.



ಈ ಎಲ್ಲಾ ಬೆಳವಣಿಗೆ ಸವಾಲುಗಳ ನಡುವೆಯೂ ರೈತರು, ಕಷ್ಟಪಟ್ಟು ಉಳಿಸಿಕೊಂಡಿರುವ ಅಲ್ಪ ಫಸಲನ್ನು ಕಟಾವು ಮಾಡಬೇಕು ಎನ್ನುವಷ್ಟರಲ್ಲಿ ಮಳೆ ಸುರಿಯುತ್ತಿರುವುದರಿಂದ ರೈತರು ತಲೆ ಮೇಲೆ ಕೈಹೊತ್ತು ಕೂರುವಂತಾಗಿದೆ.

### ಮೊಳಕೆ ಒಡೆಯುವ ಆತಂಕ

ಮೆಕ್ಕೆ ಜೋಳ ಬಿತ್ತನೆ ಮಾಡಿ ಐದು ತಿಂಗಳು ಕಳೆದಿರುವುದರಿಂದ ಗಿಡಗಳಲ್ಲಿರುವ ಜೋಳದ ತೆನೆ ಒಣಗಿದ್ದು, ಸರಿಯಾದ ಸಮಯದಲ್ಲಿ ಕಟಾವು ಮಾಡದಿರುವುದರಿಂದ ಗಿಡದಲ್ಲೇ ಮೊಳಕೆ ಒಡೆಯುವ ಆತಂಕ ಎದುರಾಗಿದೆ. ಜೋಳ ಬಿತ್ತನೆ ಮಾಡಿದ ಸುಮಾರು ನಾಲ್ಕು ತಿಂಗಳ ನಂತರ ತೆನೆಗಳನ್ನು ಕಟಾವು ಮಾಡಬೇಕು. ಬಿತ್ತನೆ ಮಾಡಿದ ಸಂದರ್ಭದಲ್ಲಿ ಭಾರೀ ಮಳೆಗೆ ತುತ್ತಾಯಿತು. ನಂತರದ ದಿನಗಳಲ್ಲಿ ಅಳಿದುಳಿದು ಹುಟ್ಟಿದ ಗಿಡಗಳಿಗೆ ರೋಗ ರುಜಿನಗಳು ಎದುರಾಯಿತು. ಗೊಬ್ಬರ, ಕೀಟನಾಶಕಗಳನ್ನು ಸಿಂಪಡಿಸಿ ಗಿಡಗಳನ್ನು ಉಳಿಸಿಕೊಂಡರು. ಇನ್ನೇನು ಕಟಾವು ಮಾಡಬೇಕೆನ್ನುವ ಸಮಯದಲ್ಲಿ ಚಂಡಮಾರುತದ ಹೊಡೆತಕ್ಕೆ ಸಿಲುಕಿರುವ ಮೆಕ್ಕೆ ಜೋಳ ಬೆಳೆದ ರೈತರು ಅತಂತ್ರ ಪರಿಸ್ಥಿತಿಗೆ ಸಿಲುಕಿದ್ದಾರೆ.

ಜೋಳ ಬಿತ್ತನೆ ಮಾಡಿದಾಗಿನಿಂದ ಕೊಯ್ಲು ಮಾಡುವವರೆಗೂ ಹವಾಮಾನ ವ್ಯತ್ಯಾಸದಿಂದ ಹಾಗು ಅತೀ ಮಳೆಯಾಗಿ ರೋಗಗಳು ಬರುತ್ತಿವೆ. ಇಳುವರಿ ಕುಂಠಿತವಾಗಿ ಕೃಷಿಗೆ ಖರ್ಚು ಮಾಡಿರುವ ಹಣ ಸಹ ವಾಪಾಸ್ ಬಾರದಂತಾಗಿದೆ ಎಂದು ರೈತರು ಅಸಾಹಾಯಕತೆ ವ್ಯಕ್ತಪಡಿಸಿದ್ದಾರೆ.

### ಫಂಗಸ್ ರೋಗದ ಆತಂಕ

ನಿರಂತರ ಮಳೆಯಿಂದ ತೇವಾಂಶ ಹೆಚ್ಚಾಗಿ ಹಲವೆಡೆ ಫಂಗಸ್ ರೋಗ ಕಾಣಿಸಿಕೊಂಡಿದೆ. ಇದರ ಪರಿಣಾಮವಾಗಿ ಜೋಳದ ಕಾಳುಗಳು ಕಪ್ಪಾಗುತ್ತಿದ್ದು, ಗುಣಮಟ್ಟ ಕಳೆದುಕೊಳ್ಳುವ ಭೀತಿ ಎದುರಾಗಿದೆ. ಬಿಸಿಲು ಇಲ್ಲದೆ ಕಟಾವು ಮಾಡಿರುವ ಜೋಳ ಒಣಗಿಸಲು ಸಾಧ್ಯವಾಗುತ್ತಿಲ್ಲ. ಮಳೆ ನಿಂತು ಬಿಸಿಲು ಕಾಣದ ಪರಿಣಾಮ ಜೋಳದ ಬೆಳೆ ಜಮೀನಿನಲ್ಲೇ ಮೊಳಕೆ ಒಡೆಯುವ ಸ್ಥಿತಿಗೆ ಬಂದಿದೆ. ಇದರಿಂದ ನಷ್ಟ ಸಂಭವಿಸುವ ಭೀತಿ ಇದೆ. ಮಳೆ ಹೀಗೆಯೇ ಮುಂದುವರೆದರೆ ಬೆಳೆ ನಷ್ಟದ ಪ್ರಮಾಣ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ. ಬೆಳೆ ಹಾನಿಯಾಗಿರುವ ಪ್ರದೇಶಕ್ಕೆ ಅಧಿಕಾರಿಗಳು ಭೇಟಿ ನೀಡಿ ಪರಿಹಾರ ನೀಡಬೇಕೆಂದು ರೈತರು ಒತ್ತಾಯಿಸಿದ್ದಾರೆ.

# ಯುವಜನತೆ ದುಶ್ಚಟಕ್ಕೆ ಬಲಿಯಾಗದಿರಿ: ದೇವರಾಜ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಯುವಜನತೆ ಹಿರಿಯರ ಮಾರ್ಗದರ್ಶನ ಅರ್ಥೈಸಿಕೊಂಡು ಯಾವುದೇ ದುಶ್ಚಟಗಳಿಗೆ ಬಲಿಯಾಗದೇ ಮುನ್ನಡೆಯಬೇಕೆಂದು ಪ್ರಾಂಶುಪಾಲ ದೇವರಾಜ್ ಸಲಹೆ ನೀಡಿದರು.

ಪಟ್ಟಣದ ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜು ಆವರಣದಲ್ಲಿ ನಶಾ ಮುಕ್ತ ಭಾರತ ಅಭಿಯಾನ ಪ್ರಯುಕ್ತ ಆಯೋಜನೆ ಮಾಡಿದ್ದ ಪ್ರಬಂಧ ಹಾಗೂ ಚಿತ್ರಕಲಾ ಸ್ಪರ್ಧೆ ಮತ್ತು ಅರಿವಿನ ಜಾಥಕ್ಕೆ ಚಾಲನೆ ನೀಡಿ ಮಾತನಾಡಿ,ಯುವಕರು ಭವ್ಯ ಭಾರತದ ಉಜ್ವಲ ಪ್ರಜೆಗಳಾಗಿದ್ದು, ಎಂದಿಗೂ ದಿಕ್ಕು ತಪ್ಪಿ ನಡೆಯಬಾರದು ಎಂಬ ಉದ್ದೇಶ ಹಾಗೂ ಭವಿಷ್ಯದ ದೃಷ್ಟಿಯಿಂದ ನಶಾ ಮುಕ್ತ ಭಾರತ ಅಭಿಯಾನದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.




ವಿದ್ಯಾರ್ಥಿಗಳು ಯಾವುದೇ ದುಶ್ಚಟಗಳಿಗೆ ಬಲಿಯಾಗುವುದಿಲ್ಲ ಎಂಬ ಮನಸ್ಥಿತಿಯನ್ನು ನಿರ್ಮಿಸಿಕೊಳ್ಳಬೇಕೆಂದು ಪ್ರಮಾಣ ವಚನ ಭೋದಿಸಲಾಯಿತು. ಇದೇ ವೇಳೆ ಕಾಲೇಜಿನ ನೂರಾರು ವಿದ್ಯಾರ್ಥಿನಿಯರು ಅರಿವಿನ ಘೋಷಣೆಗಳನ್ನು ಕೂಗುತ್ತ ಪ್ರಮುಖ ರಸ್ತೆಗಳಲ್ಲಿ ಜಾಥಾ ನಡೆಸಿದರು. ಉಪನ್ಯಾಸಕರಾದ ಸುದರ್ಶನ್, ನಿರ್ಮಲಾ, ಪವಿತ್ರ, ಮಮತಾ, ಅವಿನಾಶ್, ಶ್ರೀನಿವಾಸ್, ವೀಣಾ, ಕಾಂತರಾಜು, ರಾಘವೇಂದ್ರ, ಶಾಂತರಾಜು, ವಾಣಿ, ಲಕ್ಷ್ಮಮ್ಮ, ನಟರಾಜ್ ಇದ್ದರು.

# ಬಸ್ ನಿಲುಗಡೆಗೆ ಆಗ್ರಹಿಸಿ ಮನವಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ವಿದ್ಯಾರ್ಥಿಗಳಿಗೆ, ಹಿರಿಯ ನಾಗರಿಕರಿಗೆ, ಗರ್ಭಿಣಿಯರಿಗೆ ತೊಂದರೆಯಾಗುತ್ತಿದ್ದು ಸಕಲೇಶಪುರದಿಂದ ಬಾಗೆ ಮಾರ್ಗವಾಗಿ ಚಲಿಸುತ್ತಿರುವ ಬಸ್ ಗಳ ನಿಲುಗಡೆ ಮಾಡಬೇಕು ಎಂದು ಬಾಗೆ ಬಿಜೆಪಿ ಶಕ್ತಿ ಕೇಂದ್ರದ ಅಧ್ಯಕ್ಷ ರಾಕೇಶ್ ಆಗ್ರಹಿಸಿದರು.

ರಾಷ್ಟ್ರೀಯ ಹೆದ್ದಾರಿ 75ರಲ್ಲಿ ಬಾಗೆ ಗ್ರಾಮವಿದ್ದು ಬೆಳಗಿನ ಸಮಯದಲ್ಲಿ ಬೆಳಗೋಡು, ಮೂಗಲಿ, ಹೆಬ್ಬನಹಳ್ಳಿ, ಗುಲಗಳಲೆ ಸೇರಿ ಹತ್ತಾರು ಗ್ರಾಮಗಳಿಂದ ಜಿಲ್ಲಾ ಕೇಂದ್ರಕ್ಕೆ ನೂರಾರು ವಿದ್ಯಾರ್ಥಿಗಳು ತೆರಳುತ್ತಾರೆ. ಸಕಲೇಶಪುರ ಘಟಕ ಹಾಗೂ ಇತರೆ ಜಿಲ್ಲೆಗಳ ಘಟಕದ ಸಾರಿಗೆ ಬಸ್‌ಗಳು ನಿಲುಗಡೆ ಕೊಡದೆ ಇರುವುದರಿಂದ ಸಾಕಷ್ಟು ಅನಾನುಕೂಲವಾಗಿದೆ. ಬಸ್ ನಿಲುಗಡೆ ಕೋರಿ ಹಲವಾರು ಬಾರಿ ಸಂಬಂಧಿಸಿದ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಗ್ರಾಮಸ್ಥರು, ವಿದ್ಯಾರ್ಥಿಗಳು ತೊಂದರೆ ಅನುಭವಿಸಬೇಕಾಗಿದೆ. ಕೂಡಲೇ ಬಸ್ ನಿಲುಗಡೆ ಮಾಡಬೇಕು ಎಂದು ಆಗ್ರಹಿಸಿದರು. ಮನವಿಗೆ ಸ್ಪಂದಿಸದಿದ್ದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ತಿಳಿಸಿದರು.

ಗ್ರಾಮಸ್ಥರಾದ ವಿವೇಕ್, ಅನಿಲ್, ಸುನಿಲ್, ಹರೀಶ್ ಇದ್ದರು.

# ಹೇಮಾವತಿ ಡ್ಯಾಂ ನಿಂದ 10 ಸಾವಿರ ಕ್ಯೂಸೆಕ್ ನೀರು ಹೊರಕ್ಕೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಜೀವನದಿ ಗೊರೂರಿನ ಹೇಮಾವತಿ ಜಲಾಶಯ ಉತ್ತಮ ಮಳೆಯಿಂದಾಗಿ ಈ ಬಾರಿಯ ಮಳೆಗಾಲದಲ್ಲಿ ಅಂದರೆ ಒಂದೇ ಋತುವಿನಲ್ಲಿ ಬರೋಬ್ಬರಿ ಮೂರು ಬಾರಿ ಭರ್ತಿಯಾಗಿದೆ. ಈ ಹಿನ್ನೆಲೆಯಲ್ಲಿ ಹೆಚ್ಚುವರಿ ನೀರನ್ನು ಹೊರ ಬಿಡಲಾಗುತ್ತಿದೆ. ಜಲಾಶಯಕ್ಕಿಂದು ಒಟ್ಟು 10,369 ಕ್ಯೂಸೆಕ್ ನೀರು ಹರಿದು ಬರುತ್ತಿದ್ದು, ನದಿಗೆ 7290, ಎಡದಂಡೆ ನಾಲೆ 2630 ಕ್ಯೂಸೆಕ್ ಸೇರಿ ಒಟ್ಟಾರೆ 10320 ಕ್ಯೂಸೆಕ್ ನೀರನ್ನು ಹೊರ ಬಿಡಲಾಗುತ್ತಿದೆ.

# ಇತಿಹಾಸದಲ್ಲಿ ಈ ದಿನ

## ಅಕ್ಟೋಬರ್-30

1938: ಅಮೆರಿಕಾದಲ್ಲಿ ರೇಡಿಯೋ ಕಲಾವಿದ ಆರ್ಸನ್ ವೇಲ್ಸ್ ಅವರ "WAR OF THE WORLDS' ನಾಟಕ ಪ್ರಸಾರಗೊಂಡು, ನಿಜವಾದ ಏಲಿಯನ್ ದಾಳಿ ನಡೆದಿದೆ ಎಂದು ಅನೇಕರು ನಂಬಿದರು.

1947: ಪಾಕಿಸ್ತಾನ ಸೇನೆಯು ಕಾಶ್ಮೀರದ ಮೇಲೆ ದಾಳಿ ನಡೆಸಿದ ನಂತರ ಭಾರತಪಾಕಿಸ್ತಾನ ಯುದ್ಧ ಪ್ರಾರಂಭವಾಯಿತು.

1961: ಸೋವಿಯತ್ ಯೂನಿಯನ್ ಇತಿಹಾಸದಲ್ಲೇ ಅತಿ ದೊಡ್ಡ ಅಣುಬಾಂಬ್ Tsar Bomba ಪರೀಕ್ಷಿಸಿತು. ಇದರ ಶಕ್ತಿ ಹಿರೋಷಿಮಾ ಬಾಂಬಿಗಿಂತ ಸುಮಾರು 3,000 ಪಟ್ಟು ಅಧಿಕವಾಗಿತ್ತು.

1975: ಪ್ರಿನ್ಸ್ ಜುವಾನ್ ಕಾರ್ಲೋಸ್ ಅವರನ್ನು ಸ್ಪೇನ್‌ನ ತಾತ್ಕಾಲಿಕ ರಾಜ್ಯಾಧ್ಯಕ್ಷರಾಗಿ ನೇಮಕ ಮಾಡಲಾಯಿತು.

2003: ಬ್ರೆಜಿಲ್‌ನ ರಿಯೋ ಡಿ ಜನ್ನೈರೋ ನಗರದಲ್ಲಿ ನೂರಾರು ಮಂದಿ ಬೆಂಕಿ ಅವಘಡದಲ್ಲಿ ಪ್ರಾಣ ಕಳೆದುಕೊಂಡರು.

### ಜನನ

1735: ಜಾನ್ ಆಡಮ್ಸ್ ಅಮೆರಿಕಾದ 2ನೇ ಅಧ್ಯಕ್ಷರು

1885: ಈಜಿಪ್ಟ್‌ನ ರಾಜ ಫರೂಕ್

1937: ಕ್ಲಾಡ್ ಲೆಲೇಚ್ ಫ್ರೆಂಚ್ ಚಲನಚಿತ್ರ ನಿರ್ದೇಶಕ


1945: ಹೆನ್ರಿ ವಿಂಕ್ಲರ್ ಅಮೆರಿಕಾದ ನಟ, ನಿರ್ದೇಶಕ

### ಮರಣ

1894: ಅಂಟೋನ್ ಲಾವೋಯ್ಸಿಯರ್ ರಸಾಯನ ಶಾಸ್ತ್ರದ ಪಿತಾಮಹರಲ್ಲಿ ಒಬ್ಬರು

2007: ಕ್ರಿಶ್ಚಿಯನ್ ಬ್ರಾಡ್ ಪ್ರಸಿದ್ಧ ನಾರ್ವೇಜಿಯನ್ ಕಲಾವಿದ

# ಜೀವನದ ಸೂತಕ




**- ಸಂಜಯ್ ಕುಮಾರ್,**
**ಗುಡ್ ಸಿಟಿಜನ್ ಕಾಲೇಜ್**

ಬದಕೆಂದರೆ ಅದು ಹೀಗೇ...
ಹುಟ್ಟಿದ ದಿನ ಅದೊಂದು ಸಂಭ್ರಮ, ಆದರೆ ಹುಟ್ಟೊಂದು ಸೂತಕ..
ಸಾವು ಬರುವ ದಿನ ಇಲ್ಲ ಸಂಭ್ರಮ ..
ಆದರೆ ಅದಕ್ಕೂ ಇದೆ ಸೂತಕದ ಛಾಯೆ..
ಕೇಳು ಮನುಜ, ಹುಟ್ಟು-ಸಾವಿನ ನಡುವೆ ಇಲ್ಲದ ಗಳಿಕೆ.. ಅದು ಜೀವನ
ನಿತ್ಯ ಹೊದ್ದ ಸೂತಕದ ಛಾಯೆ

# ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷರಾಗಿ ಶಿವಾನಂದ ತಗಡೂರು ಪುನರಾಯ್ಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**


ಬೆಂಗಳೂರು: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯ ಅಧ್ಯಕ್ಷರಾಗಿ ಶಿವಾನಂದ ತಗಡೂರು ಅವರು ಪುನರಾಯ್ಕೆಯಾಗಿದ್ದಾರೆ.

2025-28ನೇ ಸಾಲಿಗೆ ನಡೆಯುತ್ತಿರುವ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಒಂದೇ ನಾಮಪತ್ರ ಬಂದಿದ್ದರಿಂದ ಅವಿರೋಧ ಆಯ್ಕೆಯಾದಂತಾಗಿದ್ದು, ಈ ಬಗ್ಗೆ ಅಧಿಕೃತ ಘೋಷಣೆಯಷ್ಟೇ ಬಾಕಿ ಇದೆ.

ಚನ್ನರಾಯಪಟ್ಟಣ ತಾಲೂಕು ಕುಗ್ರಾಮ ತಗಡೂರು ಗ್ರಾಮದ ರೈತ ಕುಟುಂಬದ ಶ್ರೀಮತಿ ಕಮಲಮ್ಮ ಮತ್ತು ವೀರೇಗೌಡ ದಂಪತಿ ಪುತ್ರನಾಗಿ ಜನಿಸಿದ ಟಿ.ವಿ.ಶಿವಾನಂದ (ಆನಂದ) ಅವರು ತೊಂಬತ್ತರ ದಶಕದಲ್ಲಿ ಪತ್ರಿಕೋದ್ಯಮ ಪ್ರವೇಶಿಸಿದವರು.

ಬಾಗೂರು-ನವಿಲೆ ಸುರಂಗ ಸಂತ್ರಸ್ತರ ಪರವಾಗಿ ಹೋರಾಟ ಸಂಘಟಿಸಿದ್ದ ಅವರು, ಹಾಸನ ಜಿಲ್ಲಾ ನೀರಾವರಿ ಹೋರಾಟ ಸಮಿತಿಗಳ ಒಕ್ಕೂಟ, ರೈತ ಹಿತ ರಕ್ಷಣಾ ಸಮಿತಿ, ಹಾಸನ ಜಿಲ್ಲಾ ಸಾಕ್ಷರತಾ ಆಂದೋಲನ ಸಮಿತಿ ಸಂಚಾಲಕರಾಗಿ ದುಡಿದವರು. ಹಲವು ಜನಪರ ಚಳವಳಿಯಲ್ಲಿ ಮುಂದಾಳಾಗಿ ಗುರುತಿಸಿಕೊಳ್ಳುತ್ತಲೇ ಪತ್ರಕರ್ತರಾಗಿ ಮಾಗಿದವರು.

2004ರಲ್ಲಿ ಹಾಸನ ಜಿಲಾ ಕಾರ್ಯ ನಿರತ ಪತ್ರಕರ್ತರ ಸಂಘ ಅಧ್ಯಕ್ಷರಾಗಿದ್ದಾಗ ಸುಸಜ್ಜಿತ ಪತ್ರಕರ್ತರ ಭವನವನ್ನು ನಿರ್ಮಾಣ ಮಾಡಿದ್ದು ಅವರ ಕ್ರಿಯಾಶೀಲತೆಗೆ ಸಾಕ್ಷಿ. 2018ರಲ್ಲಿ ಉಪಾಧ್ಯಕ್ಷರಾಗಿ ಆಯ್ಕೆಯಾಗುವ ಮೂಲಕ ಕೆಯುಡಬ್ಲ್ಯೂಜೆಗೆ ಹೆಜ್ಜೆ ಇಟ್ಟ ತಗಡೂರು, ಅಧ್ಯಕ್ಷರೊಬ್ಬರ ರಾಜೀನಾಮೆ ತರುವಾಯ ಆ ಸಂಘಟನೆಯ ಚುಕ್ಕಾಣಿ ಹಿಡಿದವರು.



ಕೋವಿಡ್ ಸಂದರ್ಭದಲ್ಲಿ ಮೃತಪಟ್ಟ ಪತ್ರಕರ್ತರ ಕುಟುಂಬಗಳಿಗೆ ತಲಾ 5 ಲಕ್ಷ ರೂ. ನೆರವು ಕೊಡಿಸಿದ ಅವರ ಹೋರಾಟದ ಪರಿಯನ್ನು ಯಾರೂ ಮರೆಯುವಂತಿಲ್ಲ. ಬಹುರೂಪಿ ಪ್ರಕಾಶನ ಪ್ರಕಟಿಸಿರುವ ಕೋವಿಡ್ ಕಥೆಗಳು ಪುಸ್ತಕದಲ್ಲಿ ಪ್ರತಿ ಘಟನೆಗಳನ್ನು ತಗಡೂರು ದಾಖಲಿಸಿದ್ದಾರೆ.

75ನೇ ವರ್ಷದ ಸ್ವಾತಂತ್ರ್ಯೋತ್ಸವ ಸಂದರ್ಭದಲ್ಲಿ ಹಿರಿಯ ಪತ್ರಕರ್ತರ ಮನೆಯಂಗಳಕ್ಕೆ ಕೆಯುಡಬ್ಲ್ಯೂಜೆ ಎನ್ನುವ ಹೊಸ ಕಲ್ಪನೆಯೊಂದಿಗೆ ಹಿರಿಯ ಪತ್ರಕರ್ತರನ್ನು ಅವರ ಮನೆ ಅಂಗಳದಲ್ಲಿಯೇ ಗೌರವಿಸಿ, ಅವರ ಅನುಭವಗಳನ್ನು ದಾಖಲೀಕರಣ ಮಾಡಿದ್ದು ವಿಶೇಷ. ಅಷ್ಟೇ ಅಲ್ಲ, ಈ ಬಗ್ಗೆ ಅಮೃತ ಬೀಜ ಎನ್ನುವ ಪುಸ್ತಕವನ್ನು ಹೊರ ತಂದಿದ್ದಾರೆ.

ರಾಜ್ಯ ಪತ್ರಕರ್ತರ ಸಮ್ಮೇಳನಗಳಿಗೆ ಹೊಸ ರೂಪ ನೀಡಿದ್ದಲ್ಲದೆ, ಪತ್ರಕರ್ತರ ಕ್ಷೇಮ ನಿಧಿಯನ್ನು ಒಂದು ಕೋಟಿ ರೂ.ಗೆ ಹೆಚ್ಚಿಸಿದ್ದು ಸಾಧನೆ. ಹತ್ತು ಹಲವು ಕಾರ್ಯಕ್ರಮದ ಮೂಲಕ ಕೆಯುಡಬ್ಲ್ಯೂಜೆಗೆ ಹೊಸ ಆಯಾಮ ನೀಡಿದ ತಗಡೂರು ಅವರು ಸತತ ಎರಡು ಬಾರಿ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿರುವುದು ಅವರ ಸಾಧನೆಗೆ ಹಿಡಿದ ಕನ್ನಡಿ ಮತ್ತು ಅವರ ಸೇವೆಗೆ ಸಂದ ಗೌರವ.

### ಇನ್ನೆರಡು ಸ್ಥಾನಕ್ಕೆ ಅವಿರೋಧ

ಅಧ್ಯಕ್ಷ, ಉಪಾಧ್ಯಕ್ಷ, ಕಾರ್ಯದರ್ಶಿ, ಖಜಾಂಚಿ ಸೇರಿದಂತೆ ಒಟ್ಟು ಒಂಬತ್ತು ಸ್ಥಾನಗಳಲ್ಲಿ

ಪ್ರಧಾನ ಕಾರ್ಯದರ್ಶಿ ಸ್ಥಾನಕ್ಕೆ ಜಿ.ಸಿ.ಲೋಕೇಶ್ ಮತ್ತು ಖಜಾಂಚಿ ಸ್ಥಾನಕ್ಕೆ ವಾಸುದೇವ ಹೊಳ್ಳ ಅವರುಗಳು ಅವಿರೋಧವಾಗಿ ಆಯ್ಕೆಯಾಗಿದ್ದು, ಈ ಬಗ್ಗೆ ಅಧಿಕೃತ ಘೋಣೆಯಷ್ಟೇ ಬಾಕಿ ಇದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248